ಸಹಕಾರ ಚುನಾವಣಾ ಪ್ರಾಧಿಕಾರ,
ಟಿ.ಟಿ.ಎಂ.ಸಿ.ಕಟ್ಟಡ, 3ನೇಮಹಡಿ, ಶ್ರೀ ಕೆಂಗಲ್ ಹನುಮಂತಯ್ಯರಸ್ತೆ, ಶಾಂತಿನಗರ, ಬೆಂಗಳೂರು-560027.
E-mail : coea-coop@karnataka.gov.in website: coea.karnataka.gov.in
Phone : 080-22220066 / 29709014

ಸಂಖ್ಯೆ : ಸಚುಪ್ರಾ/ಆಡಳಿತ/ಕೋವಿಡ್-19/ 6(4) /ಸುತ್ತೋಲೆ/2021 ದಿನಾಂಕ 08/10/2021

ಚುನಾವಣಾ ತುರ್ತು

# ಸುತ್ತೋಲೆ

ವಿಷಯ : ಸಹಕಾರ ಸಂಘಗಳು / ಸೌಹಾರ್ದ ಸಹಕಾರಿಗಳ ಆಡಳಿತ ಮಂಡಲಿಗಳ ಚುನಾವಣೆಗಳನ್ನು ನಡೆಸುವ ಬಗ್ಗೆ.

ಉಲ್ಲೇಖ :
1) ಈ ಕಛೇರಿಯ ಸುತ್ತೋಲೆ ಸಂಖ್ಯೆ : ಸಚುಪ್ರಾ/ಆಡಳಿತ/ ಕೋವಿಡ್-19/6(1)/ಸುತ್ತೋಲೆ/202 ದಿನಾಂಕ 26.04.2021.
2) ಈ ಕಛೇರಿಯ ಸುತ್ತೂಲೆ ಸಂಖ್ಯೆ : ಸಚುಪ್ರಾ/ಆಡಳಿತ/ ಕೋವಿಡ್-19/6(2)/ಸುತ್ತೂಲೆ/2021 ದಿನಾಂಕ 21.06.2021.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬಹು ಮಹಡಿಗಳ ಕಟ್ಟಡ, ಬೆಂಗಳೂರು ಇವರ ಪತ್ರ ಸಂಖ್ಯೆ : ಸಿ.ಒ/40/ ಸಿ.ಎಲ್.ಎಂ/2021(ಇ) ದಿನಾಂಕ 17.07.2021.
4) ಈ ಕಛೇರಿಯ ಸುತ್ತೂಲೆ ಸಂಖ್ಯೆ : ಸಚುಪ್ರಾ/ಆಡಳಿತ/ ಕೋವಿಡ್-19/6(3)/ಸುತ್ತೂಲೆ/2021 ದಿನಾಂಕ 19.07.2021.
5) ಸರ್ಕಾರದ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬಹು ಮಹಡಿಗಳ ಕಟ್ಟಡ, ಬೆಂಗಳೂರು ಇವರ ಪತ್ರ ಸಂಖ್ಯೆ : ಸಿ.ಒ/40/ ಸಿ.ಎಲ್.ಎಂ/2021(ಭಾಗ-1)(ಇ) ದಿನಾಂಕ : 08.10.2021.

★★★★★

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದಲ್ಲಿ ಕೊರೋನಾ ವೈರಸ್ (ಕೋವಿಡ್-19) ಸಾಂಕ್ರಾಮಿಕವಾಗಿ ಹರಡುತ್ತಿದ್ದ ಹಿನ್ನಲೆಯಲ್ಲಿ ಕೋವಿಡ್-19ರ ಸಾಂಕ್ರಾಮಿಕ ರೋಗದ ಹರಡುವಿಕೆಯನ್ನು ತಡೆಗಟ್ಟುವ ಹಿನ್ನಲೆಯಲ್ಲಿ ಚುನಾವಣೆ ನಡೆಸಲು ಬಾಕಿ ಇದ್ದ ಎಲ್ಲಾ ವಿಧದ ಸಹಕಾರ ಸಂಘಗಳ / ಸೌಹಾರ್ದ ಸಹಕಾರಿಗಳ ಚುನಾವಣೆಗಳನ್ನು ಮುಂದಿನ ಆದೇಶದವರೆಗೆ ಕರ್ನಾಟಕ ಸಹಕಾರ ಸಂಘಗಳ ನಿಯಮಗಳು, 1960ರ ನಿಯಮ 14-ಹೆಚ್ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ, 1997 ಮತ್ತು ನಿಯಮಗಳು 5-ಎಂ ಗಳಂತೆ ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ದತ್ತವಾದ ಅಧಿಕಾರವನ್ನು ಚಲಾಯಿಸಿ ಎಲ್ಲಾ ಚುನಾವಣೆಗಳನ್ನು (ಅಧ್ಯಕ್ಷರು/ಉಪಾಧ್ಯಕ್ಷರು/ನಿರ್ದೇಶಕರ ಖಾಲಿ ಬಿದ್ದ ಸ್ಥಾನಗಳ ಚುನಾವಣೆಗಳನ್ನು ಸಹಾ) ಮುಂದಿನ 6 ತಿಂಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಉಲ್ಲೇಖ(1) ಮತ್ತು (2)ರ ಈ ಕಛೇರಿಯ ಅಧಿಸೂಚನೆಗಳಂತೆ ಮುಂದೂಡಲಾಗಿರುತ್ತದೆ.

ಈ ಮಧ್ಯೆ, ಉಲ್ಲೇಖ(3)ರ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಪತ್ರ ದಿನಾಂಕ 17.07.2021 ರಲ್ಲಿ ಸಚಿವ ಸಂಪುಟ ಸಭೆಯ ಸಂಖ್ಯೆ : 10 ಪ್ರಕರಣ ಸಂಖ್ಯೆ : ಸಿ/264/2021 ದಿನಾಂಕ 15.07.2021ರಲ್ಲಿನ ನಿರ್ಣಯದಂತೆ ಸಹಕಾರ ಸಂಘಗಳ ನಿರ್ದೇಶಕ ಸ್ಥಾನಗಳಿಗೆ ಚುನಾವಣೆ ನಡೆದು ಅಧ್ಯಕ್ಷರ / ಉಪಾಧ್ಯಕ್ಷರ / ಪದಾಧಿಕಾರಿಗಳ ಚುನಾವಣೆಗಳು ಬಾಕಿ ಇದ್ದಲ್ಲಿ ಅಂತಹ ಪ್ರಕರಣಗಳಿಗೆ ಸಂಬಂಧಿಸಿದಂತೆ ಅಧ್ಯಕ್ಷರ / ಉಪಾಧ್ಯಕ್ಷರ / ಪದಾಧಿಕಾರಿಗಳ ಚುನಾವಣೆಯನ್ನು ನಡೆಸಲು ಸೂಕ್ತ ಸುತ್ತೋಲೆಯನ್ನು ಹೊರಡಿಸುವಂತೆ ಪ್ರಾಧಿಕಾರಕ್ಕೆ ನಿರ್ದೇಶಿಸಲಾಗಿರುತ್ತದೆ.

ಅದರಂತೆ, ಉಲ್ಲೇಖ(4)ರ ಸುತ್ತೋಲೆಯಲ್ಲಿ ಈಗಾಗಲೇ ಸಹಕಾರ ಸಂಘಗಳ / ಸೌಹಾರ್ದ ಸಹಕಾರಿಗಳ ನಿರ್ದೇಶಕ ಸ್ಥಾನಗಳಿಗೆ ಚುನಾವಣೆ ನಡೆದು ಅಧ್ಯಕ್ಷರ / ಉಪಾಧ್ಯಕ್ಷರ / ಪದಾಧಿಕಾರಿಗಳ ಚುನಾವಣೆಗಳು ಬಾಕಿ ಇದ್ದಲ್ಲಿ ಅಂತಹ ಪ್ರಕರಣಗಳಿಗೆ ಸಂಬಂಧಿಸಿದಂತೆ ಅಧ್ಯಕ್ಷರ / ಉಪಾಧ್ಯಕ್ಷರ / ಪದಾಧಿಕಾರಿಗಳ ಚುನಾವಣೆಯನ್ನು ನಡೆಸಲು ಅನುಮತಿಸಿ ಆದೇಶಿಸಲಾಗಿತ್ತು.

ಸರ್ಕಾರದ ಕಾರ್ಯದರ್ಶಿ, ಸಹಕಾರ ಇಲಾಖೆ, ಬೆಂಗಳೂರು ಇವರ ಉಲ್ಲೇಖ(5)ರ ಪತ್ರದಲ್ಲಿ ದಿನಾಂಕ 05.10.2021 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ "ಸಹಕಾರ ಸಂಘಗಳು, ನೋಂದಾಯಿತ ಸೊಸೈಟಿಗಳು, ಸಂಘ ಸಂಸ್ಥೆಗಳ ಕಾರ್ಯಕಾರಿ ಮಂಡಳಿ / ನಿರ್ದೇಶಕ ಮಂಡಳಿಯ (**Executive Committee / Board of Directors**) ಚುನಾವಣೆಗಳನ್ನು ನಡೆಸಲು ಸಹ ಸಂಪುಟವು ನಿರ್ಣಯ ತೆಗೆದುಕೊಂಡಿದ್ದು" ಸಚಿವ ಸಂಪುಟ ಸಭೆಯ ನಿರ್ಣಯದಂತೆ ಸೂಕ್ತ ಕ್ರಮ ಕೈಗೊಳ್ಳಲು ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ದಿನಾಂಕ: 08.10.2021ರ ತಮ್ಮ ಪತ್ರದಲ್ಲಿ ನಿರ್ದೇಶನವನ್ನು ನೀಡಿರುತ್ತಾರೆ.

ಆದುದರಿಂದ, ಮೇಲ್ಕಂಡ ಉಲ್ಲೇಖ(1) ರಿಂದ (4)ರವರೆಗಿನ ಸುತ್ತೋಲೆ ಮತ್ತು ಪತ್ರಗಳಲ್ಲಿ ಸಹಕಾರ ಸಂಘಗಳು / ಸೌಹಾರ್ದ ಸಹಕಾರಿಗಳ ಆಡಳಿತ ಮಂಡಲಿ ನಿರ್ದೇಶಕರ ಚುನಾವಣೆಗೆ ವಿಧಿಸಲಾಗಿದ್ದ ನಿರ್ಬಂಧವನ್ನು ತೆರವುಗೊಳಿಸಿ ಸಹಕಾರ ಸಂಘಗಳ / ಸೌಹಾರ್ದ ಸಹಕಾರಿಗಳ ಆಡಳಿತ ಮಂಡಲಿಗೆ ಬಾಕಿ ಇರುವ ಹಾಗೂ ಅವಧಿ ಮುಗಿಯಲಿರುವ ಚುನಾವಣೆಗಳನ್ನು ನಡೆಸಲು ಅನುಮತಿಸಲಾಗಿದೆ.

ಉಲ್ಲೇಖ(4)ರ ನಿರ್ದೇಶನದನ್ವಯ ಚುನಾವಣೆಗಳನ್ನು ಮುಂದೂಡುವ ಪೂರ್ವದಲ್ಲಿ ಚುನಾವಣಾ ಪ್ರಕ್ರಿಯೆಯು ಯಾವ ಹಂತದಲ್ಲಿ ನಿಲ್ಲಿಸಲಾಗಿತ್ತೋ ಆ ಹಂತದಿಂದ ಪ್ರಾರಂಭಿಸಿ ಚುನಾವಣಾ ಪ್ರಕ್ರಿಯೆಯನ್ನು ಪೂರ್ಣಗೊಳಿಸುವುದು. ಮತ್ತು ಆಡಳಿತ ಮಂಡಲಿ ಅವಧಿ ಮುಕ್ತಾಯಗೊಂಡು ಚುನಾವಣಾ ಪ್ರಕ್ರಿಯೆ ಪ್ರಾರಂಭವಾಗದೆ ಆಡಳಿತಾಧಿಕಾರಿ / ವಿಶೇಷಾಧಿಕಾರಿಗಳು ನೇಮಕಗೊಂಡ ಹಾಗೂ ಆಡಳಿತ ಮಂಡಲಿಯ ಪದಾವಧಿಯು ಮುಕ್ತಾಯವಾಗುವ ಸಹಕಾರ ಸಂಘಗಳ ಚುನಾವಣೆಗಳನ್ನು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ/ನಿಯಮಗಳು ಮತ್ತು ಕರ್ನಾಟಕ ಸೌಹಾರ್ದ ಸಹಕಾರಿಗಳ ಅಧಿನಿಯಮ/ನಿಯಮಗಳ ಅನುಸಾರ ಚುನಾವಣಾ ಪ್ರಕ್ರಿಯೆಯನ್ನು ಪ್ರಾರಂಭಿಸಿ ಪೂರ್ಣಗೊಳಿಸಲು ತಿಳಿಸಿದೆ.

ಚುನಾವಣೆಗಳನ್ನು ನಡೆಸುವಾಗ ಕೋವಿಡ್-19ರ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಈ ಕಛೇರಿಯಿಂದ ಹೊರಡಿಸಿರುವ ಪತ್ರ ಸಂಖ್ಯೆ : ಸಚುಪ್ರಾ/ಬೆಂಗಳೂರು/ಕೋವಿಡ್-19/ಕೊರೋನಾ/2020 ದಿನಾಂಕ 04.09.2020 ಮಾರ್ಗಸೂಚಿಗಳನ್ನು ತಪ್ಪದೆ ಪಾಲಿಸಿ ಸಹಕಾರ ಸಂಘಗಳ / ಸೌಹಾರ್ದ ಸಹಕಾರಿಗಳ ಆಡಳಿತ ಮಂಡಲಿ ಚುನಾವಣೆ, ಖಾಲಿ ಬಿದ್ದ ನಿರ್ದೇಶಕರ ಸ್ಥಾನಗಳ ಚುನಾವಣೆ ಮತ್ತು ಹೊಸದಾಗಿ ನೊಂದಣಿಯಾದ ಸಹಕಾರ ಸಂಘಗಳ / ಸೌಹಾರ್ದ ಸಹಕಾರಿಗಳ ಪ್ರಥಮ ಆಡಳಿತ ಮಂಡಲಿ ಚುನಾವಣೆಗಳನ್ನು ನಡೆಸಿ ಫಲಿತಾಂಶವನ್ನು ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ಸಲ್ಲಿಸಲು ಈ ಮೂಲಕ ತಿಳಿಸಿದೆ.

(ಡಾ: ಎನ್.ಎಸ್.ಚನ್ನಪ್ಪಗೌಡ)
ಆಯುಕ್ತರು,
ಸಹಕಾರಚುನಾವಣಾ ಪ್ರಾಧಿಕಾರ,
ಬೆಂಗಳೂರು-27.

ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ :-

01. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
02. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52.
03. ರಾಜ್ಯದ ಎಲ್ಲಾ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ / ಮೈಸೂರು ವಿಭಾಗ / ಬೆಳಗಾವಿ ವಿಭಾಗ / ಕಲಬುರಗಿ ವಿಭಾಗ/ ಹಾಗೂ ಅಪೆಕ್ಸ್ ಸಹಕಾರ ಸಂಘಗಳ ಚುನಾವಣಾಧಿಕಾರಿಗಳು,
04. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಫೆಡರಲ್ ಸಹಕಾರ ಸಂಘಗಳ ಚುನಾವಣಾಧಿಕಾರಿಗಳು.

05. ರಾಜ್ಯದ ನಾಲ್ಕು ಪ್ರಾಂತಗಳ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂದಕರು, ಬೆಂಗಳೂರು ಪ್ರಾಂತ / ಮೈಸೂರು ಪ್ರಾಂತ / ಬೆಳಗಾವಿ ಪ್ರಾಂತ / ಕಲಬುರಗಿ ಪ್ರಾಂತ ಹಾಗೂ ಮಾಧ್ಯಮಿಕ ಸಹಕಾರ ಸಂಘಗಳ ಚುನಾವಣಾಧಿಕಾರಿಗಳು,

06. ರಾಜ್ಯದ ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪ ನಿಬಂಧಕರುಗಳು ಹಾಗೂ ಪ್ರಾಥಮಿಕ ಸಹಕಾರ ಸಂಘಗಳ ಚುನಾವಣಾಧಿಕಾರಿಗಳು.

07. ಸಹಕಾರ ಸಂಘಗಳ ಜಂಟಿ ನಿಬಂಧಕರು ಹಾಗೂ ಸೌಹಾರ್ದ ಸಹಕಾರಿಗಳ ಚುನಾವಣಾಧಿಕಾರಿಗಳು, (ಪಟ್ಟಣ ಬ್ಯಾಂಕುಗಳ ವಿಭಾಗ) ಕೇಂದ್ರ ಕಛೇರಿ, ಬೆಂಗಳೂರು.

08. ಸಹಕಾರ ಸಂಘಗಳ ಜಂಟಿ ನಿಬಂಧಕರು (ಐ.ಸಿ.ಡಿ.ಪಿ) ಕೇಂದ್ರ ಕಛೇರಿ, ಬೆಂಗಳೂರು ಹಾಗೂ ಪ್ರಾಥಮಿಕ ಸಹಕಾರ ಸಂಘಗಳ ಚುನಾವಣಾಧಿಕಾರಿಗಳು,

09. ಸಹಕಾರ ಸಂಘಗಳ ಜಂಟಿ ನಿಬಂಧಕರು (ಚುನಾವಣೆಗಳು) ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು. ಹಾಗೂ ಪ್ರಾಥಮಿಕ ಸಹಕಾರ ಸಂಘಗಳ ಚುನಾವಣಾಧಿಕಾರಿಗಳು.

10. ಸಹಕಾರ ಸಂಘಗಳ ಉಪ ನಿಬಂಧಕರು ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ಹಾಗೂ ಪ್ರಾಥಮಿಕ ಸಹಕಾರ ಸಂಘಗಳ ಚುನಾವಣಾಧಿಕಾರಿಗಳು.

11. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರುಗಳು / ಜಂಟಿ ನಿರ್ದೇಶಕರುಗಳು ಹಾಗೂ ಸೌಹಾರ್ದ ಸಹಕಾರಿಗಳ ಚುನಾವಣಾಧಿಕಾರಿಗಳು.

12. ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಬೆಂಗಳೂರು ಪ್ರಾಂತ / ಮೈಸೂರು ಪ್ರಾಂತ / ಬೆಳಗಾವಿ ಪ್ರಾಂತ / ಕಲಬುರಗಿ ಪ್ರಾಂತ ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು.